ಓಎಸ್ ನಂಃ 381 /2021 ಪಿಡಬ್ಲ್ಯೂ- 1

ದಿನಾಂಕಃ 20.02.2023 ರಂದು ಸಾಕ್ಷಿದಾರರಿಗೆ ಪ್ರಮಾಣ ವಚನ ಮಾಡಿಸಲಾಯಿತು.

## ಮುಖ್ಯ ವಿಚಾರಣೆಃ ವಾದಿಯ ಪರ ಶ್ರೀ ಎಂ.ಎನ್.ಕೆ. ವಕೀಲರಿಂದಃ

ನಾನು ಈ ದಾವೆಯಲ್ಲಿ ವಾದಿಯ ಪರ ಸಾಕ್ಷಿಯಾಗಿದ್ದು ನನ್ನ ಮುಖ್ಯ ವಿಚಾರಣೆಯ ಸಲುವಾಗಿ ಶಪಥ ಪತ್ರವನ್ನು ಹಾಜರುಪಡಿಸಿದ್ದೇನೆ. ಅದನ್ನು ನನ್ನ ಹೇಳಿಕೆಯ ಮೇರೆಗೆ ತಯಾರಿಸಿದ್ದಾರೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಎಲ್ಲಾ ಸಂಗತಿಗಳು ಸತ್ಯವಾಗಿದೆ, ಇದರಲ್ಲಿ ಇರುವ ಸಹಿ ನನ್ನದು.

ಸಾಕ್ಷಿಯು ದಿಃ 16.10.2015 ರ ಕ್ರಯ ಪತ್ರವನ್ನು ನಿಪಿ 1 ಎಂದು, ವಾದಿ ಮತ್ತು ಪ್ರತಿವಾದಿ, ಸಾಕ್ಷಿದಾರರ ಸಹಿಗಳನ್ನು ಹಾಗೂ ಪತ್ರಬರಹಗಾರರ ಸಹಿಗಳನ್ನು ಗುರುತಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ 1(ಎ) ರಿಂದ (ಎಫ್) ಎಂದು, ದಿಃ 16.03.2019 ಕಾನೂನು ಬದ್ಧ ನೋಟಿಸ್ ಅನ್ನು ನಿಪಿ 2 ಎಂದು, ಅಂಚೆ ಸ್ವೀಕೃತಿಗಳನ್ನು ನಿಪಿ 3 ರಿಂದ 6 ಎಂದು, ಆರ್.ಟಿ.ಸಿ ಯನ್ನು ನಿಪಿ 7 ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ ಸಮಯ ಕೋರಿದ್ದು ಸಮಯ ನೀಡಲಾಯಿತು.

(ಸಾಕ್ಷಿದಾರರ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಅನುಸಾರವಾಗಿ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಸಾ ಓ ಹೇ ಕೇ ಸ ಅದೆ.

ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾ.
ದಂಡಾಧಿಕಾರಿಗಳು, ಕೃಷ್ಣರಾಜಪೇಟೆ